## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಬಿ.ಮಹಾದೇವಯ್ಯ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಲಿಂಗಸೂಗೂರು, ರಾಯಚೂರು ಜಿಲ್ಲೆ ಇವರ ಅಮಾನತ್ತಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವ ಬಗ್ಗೆ.

ಓದಲಾಗಿದೆ:- 1) ಸರ್ಕಾರದ ಆದೇಶದ ಸಂಖ್ಯೆ: ಗ್ರಾಅಪ 67 ವಿಸೇಬಿ 2012 ದಿ 03.09.2012.
2) ಸರ್ಕಾರದ ಆದೇಶದ ಸಂಖ್ಯೆ: ಗ್ರಾಅಪ 67 ವಿಸೇಬಿ 2012 ದಿ 08.08.2012.
3) ಸರ್ಕಾರದ ಆದೇಶದ ಸಂಖ್ಯೆ: ಗ್ರಾಅಪ 67 ವಿಸೇಬಿ 2012 ದಿ 27.01.2016
4) ಶ್ರೀ ಬಿ. ಮಹದೇವಯ್ಯ, ಇವರ ಮನವಿ ದಿ 27-01-2016.

------------

**ಪ್ರಸ್ತಾವನೆ:-**

ಶ್ರೀ ಬಿ. ಮಹದೇವಯ್ಯ, ಇವರು ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಲಿಂಗಸೂಗೂರು, ರಾಯಚೂರು ಜಿಲ್ಲೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿರುವ ಕರ್ತವ್ಯಲೋಪ/ದುರ್ನಡತೆಯ ಆರೋಪಗಳಿಗೆ ಸಂಬಂಧಿಸಿದಂತೆ ಮೇಲೆ ಕ್ರಮ ಸಂಖ್ಯೆ-(1)ರಲ್ಲಿ ಓದಲಾದ ದಿನಾಂಕ 03.08.2012ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ-(2)ರಲ್ಲಿ ಓದಲಾದ ದಿನಾಂಕ 08.08.2012ರ ಆದೇಶದಲ್ಲಿ ಶ್ರೀ ಬಿ.ಮಹದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಲಿಂಗಸೂಗೂರು ಇವರ ಅಮಾನತ್ತು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ-(3)ರಲ್ಲಿ ಓದಲಾದ ದಿನಾಂಕ 27.01.2016ರ ಆದೇಶದಲ್ಲಿ ಶ್ರೀ ಬಿ.ಮಹಾದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಲಿಂಗಸೂಗೂರು ಇವರ ವಿರುದ್ಧದ ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ ದೋಷಮುಕ್ತಗೊಳಿಸಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ-(4)ರಲ್ಲಿ ಓದಲಾದ ದಿನಾಂಕ 27.01.2016ರ ಪತ್ರದಲ್ಲಿ ಶ್ರೀ ಬಿ.ಮಹಾದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಲಿಂಗಸೂಗೂರು ಇವರು ಸರ್ಕಾರಕ್ಕೆ ಮನವಿ ಸಲ್ಲಿಸಿ, ದಿನಾಂಕ 01.08.2012 ದಿಂದ ದಿನಾಂಕ 08.08.2012ರ ವರೆಗಿನ ಅಮಾನತ್ತು ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸಲು ಕೋರಿರುತ್ತಾರೆ. ಸರ್ಕಾರವು ಸದರಿಯವರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ್ದು, ಶ್ರೀ ಬಿ.ಮಹಾದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಲಿಂಗಸೂಗೂರು ಇವರ ವಿರುದ್ಧ ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ ದೋಷಮುಕ್ತಗೊಳಿಸಿ ಆದೇಶಿಸಿರುವುದರಿಂದ, ಸದಕರಿಯವರು ದಿನಾಂಕ 01.08.2012 ರಿಂದ ದಿನಾಂಕ 08.08.2012ರ ವರೆಗೆ ಕಳೆದ ಅಮಾನತ್ತು ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಗಳು 100(7)ರ

ಅನ್ವಯ ಕರ್ತವ್ಯದ ಅವಧಿಯೆಂದು ಪರಿಗಣಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 25 ವಿಸೇಬಿ 2016 ಬೆಂಗಳೂರು ದಿನಾಂಕ: 09.03.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಶ್ರೀ. ಬಿ.ಮಹಾದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಲಿಂಗಸೂಗೂರು, ರಾಯಚೂರು ಜಿಲ್ಲೆ ಇವರು ಅಮಾನತ್ತಿನಲ್ಲಿ ಕಳೆದ ದಿನಾಂಕ 01.08.2012 ರಿಂದ ದಿನಾಂಕ 08.08.2012ರ ವರೆಗಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಗಳು 100(7)ರನ್ವಯ ಕರ್ತವ್ಯದ ಅವಧಿಯೆಂದು ಪರಿಗಣಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

9/3/16

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು-ಬಿ & ಸಿ ಶಾಖೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು.
3. ಶ್ರೀ ಬಿ.ಮಹಾದೇವಯ್ಯ, ಕಾರ್ಯನಿರ್ವಾಹಕ ಅಧಿಕಾರಿ (ನಿವೃತ್ತಿ), # 8/ಎ, 4ನೇ ಮುಖ್ಯರಸ್ತೆ, 10ನೇ ಕ್ರಾಸ್, ಲಲಿತಮಹಲ್ ನಗರ ಮೈಸೂರು-570028.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ). ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
5. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.